**ಕರ್ನಾಟಕ ಸರ್ಕಾರ**

**ಸಂಖ್ಯೆ:**ಗ್ರಾಅಪಂರಾ 483 ಜಿಪಸ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16-11-2021.

**ಅಧಿಕೃತ ಜ್ಞಾಪನ**

**ವಿಷಯ:** ಶ್ರೀ ಉಪೇಂದ್ರ ಆರ್.ರಾಯ್ಕರ್, ನಿವೃತ್ತ ಆಪ್ತ ಕಾರ್ಯದರ್ಶಿ(ಆಯ್ಕೆ ಶ್ರೇಣಿ), ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳನ್ನಾಗಿ ನೇಮಿಸುವ ಬಗ್ಗೆ.

**ಉಲ್ಲೇಖ:**1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ದಿನಾಂಕ:13-10-2021.

2. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪಂರಾ 319 ಜಿಪಸ 2021, ದಿನಾಂಕ:13-10-2021

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 308-ಇ ಉಪಬಂಧದನ್ವಯ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಉದ್ದೇಶಕ್ಕಾಗಿ ಉಲ್ಲೇಖ(1)ರ ದಿನಾಂಕ:13-10-2021ರ ಆದೇಶದನ್ವಯ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿರುತ್ತದೆ. ಈ ಆಯೋಗಕ್ಕೆ ಶ್ರೀ ಎಂ.ಲಕ್ಷ್ಮೀನಾರಾಯಣ, ನಿವೃತ್ತ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಇವರನ್ನು ಉಲ್ಲೇಖ(2)ರ ಅಧಿಸೂಚನೆಯನ್ವಯ ಅಧ್ಯಕ್ಷರನ್ನಾಗಿ ನೇಮಿಸಲಾಗಿದ್ದು, ಸದರಿ ಅಧಿಕಾರಿಯವರು ದಿನಾಂಕ:16-10-2021ರಂದು ಆಯೋಗದ ಅಧ್ಯಕ್ಷರ ಹುದ್ದೆಗೆ ವರದಿ ಮಾಡಿಕೊಂಡಿರುತ್ತಾರೆ.

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಕೆಲಸಗಳ ಸುಗಮ ನಿರ್ವಹಣೆಗಾಗಿ ಶ್ರೀ ಉಪೇಂದ್ರ ಆರ್.ರಾಯ್ಕರ್, ನಿವೃತ್ತ ಆಪ್ತ ಕಾರ್ಯದರ್ಶಿ(ಆಯ್ಕೆ ಶ್ರೇಣಿ), ಕರ್ನಾಟಕ ಸರ್ಕಾರ ಸಚಿವಾಲಯ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಆಯೋಗದ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳನ್ನಾಗಿ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿ ಆದೇಶಿಸಲಾಗಿರುತ್ತದೆ.

Chetna 16/11/21
**(ಚೇತನ.ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

16/11/21.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಶ್ರೀ ಎಂ.ಲಕ್ಷ್ಮೀನಾರಾಯಣ, ಅಧ್ಯಕ್ಷರು, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ, ಬೆಂಗಳೂರು.
5. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ,ಕಟ್ಟಡ(ಹಿಂಭಾಗ), 1ನೇ ಮಹಡಿ, ನಂ:8,ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-52.
6. ಆಯುಕ್ತರು(ಪಂ.ರಾಜ್), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
9. ಸಂಬಂಧಿಸಿದ ಅಧಿಕಾರಿಗೆ.
10. ಇಲಾಖಾ ವೈಬ್‌ಸೈಟ್.
11. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.